# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority


ಸಂಖ್ಯೆ: ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/ 23/2022-23 ದಿನಾಂಕ: 31.03.2023

ಬೆಂಗಳೂರು
ಅನುಸೂಚಿ–ಎ 5
(ಉಪವಿಧಿ ಸಂಖ್ಯೆ: 4.1)

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

## ನಕ್ಷೆ ಮಂಜೂರಾತಿ ಪತ್ರ

ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಚಿಕ್ಕಗುಬ್ಬಿ ಗ್ರಾಮದ ಸರ್ವೆ ನಂ. 103 ಹಾಗೂ ಭೈರತಿ ಗ್ರಾಮದ ಸರ್ವೆ ನಂ. 129 & 130 ರಲ್ಲಿನ ಒಟ್ಟು 08 ಎಕರೆ 38.50ಗುಂಟೆ (36269.44 ಚ.ಮೀ) ವಿಸ್ತೀರ್ಣದ ಪ್ರದೇಶದಲ್ಲಿ ಬಹುಮಹಡಿ ವಸತಿ ಕಟ್ಟಡ ನಿರ್ಮಿಸಲು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ: 6637, ದಿನಾಂಕ: 23.02.2023 ರಂದು ನಕ್ಷೆ ಮಂಜೂರಾತಿಗೆ ಅನುಮೋದನೆ ನೀಡಿರುತ್ತಾರೆ.

**ಶ್ರೀಮತಿ/ಶ್ರೀ**

ಮೆ: ಡಿ.ಎನ್.ಆರ್. ಕಾರ್ಪೋರೇಷನ್ ಪ್ರೈ.ಲಿ.,
ಜಿಪಿಎ ದಾರರಾದ, ಶ್ರೀ ವಿಪುಲ್ ಕುಮತ್,
ಮ್ಯಾನೇಜಿಂಗ್ ಡೈರೆಕ್ಟರ್,
#303 ಮತ್ತು 304, 3ನೇ ಮಹಡಿ,
ಕ್ವೀನ್ಸ್ ಕಾರ್ನರ್ ಅಪಾರ್ಟ್ ಮೆಂಟ್,
#3, ಕ್ವೀನ್ಸ್ ರಸ್ತೆ, ಬೆಂಗಳೂರು – 560 001.

**ಮಾನ್ಯರೆ,**

ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಚಿಕ್ಕಗುಬ್ಬಿ ಗ್ರಾಮದ ಸರ್ವೆ ನಂ. 103 ಹಾಗೂ ಭೈರತಿ ಗ್ರಾಮದ ಸರ್ವೆ ನಂ. 129 & 130 ರಲ್ಲಿ ಈ ಕೆಳಕಂಡಂತೆ ವಸತಿ ಘಟಕಗಳನ್ನೊಳಗೊಂಡ ಕಟ್ಟಡಗಳ ನಿರ್ಮಾಣ ಮಾಡಲು ಈ ಕಛೇರಿಗೆ ಅರ್ಜಿ ಸಲ್ಲಿಸಿ, ನಕ್ಷೆ ಮಂಜೂರಾತಿ ಕೋರಿರುತ್ತೀರಿ.

| Sl No | Name of Blocks | No. of Floors | Total No. of Units |
|---|---|---|---|
| 1 | Tower-A | 2BF+GF+22UF+TF | 178 ಸಂಖ್ಯೆ |
| 2 | Tower-B | 2BF+GF+22UF+TF | 178 ಸಂಖ್ಯೆ |
| 3 | Tower-C | 2BF+GF+22UF+TF | 178 ಸಂಖ್ಯೆ |
| 4 | Tower-D | 2BF+GF+22UF+TF | 178 ಸಂಖ್ಯೆ |
| 5 | Tower-E (Amenity and EWS) | GF+09UF+TF | 72 ಸಂಖ್ಯೆ |
| **ಒಟ್ಟಾರೆ** | | | **784 (EWS ಒಳಗೊಂಡಂತೆ)** |

ನಕ್ಷೆ ಮಂಜೂರಾತಿಯನ್ನು ದಿನಾಂಕ: 31.03.2023 ರಿಂದ ದಿನಾಂಕ: 30.03.2025 ರವರೆಗೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಮಂಜೂರಾತಿ ಮಾಡಲಾಗಿದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

<u>ಪಾಲಿಸಬೇಕಾದ ಷರತ್ತುಗಳು</u>

1) ಪ್ರಾಧಿಕಾರದ ನಗರ ಯೋಜನಾ ವಿಭಾಗ ಕಾರ್ಯಾದೇಶ ಸಂಖ್ಯೆ: ಬೆಂಅಪ್ರಾ/ನಯೋಸ/DLP-06/2776, ದಿನಾಂಕ: 17.01.2023 ದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸುವುದು.
2) ಕೆ.ಎಸ್.ಪಿ.ಸಿ.ಬಿ ರವರ ಎಲ್ಲಾ ಮಾನದಂಡಗಳನ್ನು / ವಿಧಿಸುವ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

P.T.O...

ಆಯುಕ್ತರ ಪರವಾಗಿ 31/03/2023
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

3) SEIAA, ಕರ್ನಾಟಕ ರವರ ಪತ್ರ ಸಂಖ್ಯೆ: SEIAA/132/CON/2022, ದಿ: 03.01.2023 ರಲ್ಲಿ ವಿವರಿಸಿರುವ ಎಲ್ಲಾ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

4) Airport Authority of India, ಬೆಂಗಳೂರು ರವರ ಪತ್ರ ಸಂಖ್ಯೆ: BIAL/South/B/060222/675393, ದಿ: 23.06.2022 ರಲ್ಲಿ ವಿವರಿಸಿರುವ ಎಲ್ಲಾ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

5) ಅಧೀಕ್ಷಕ ಇಂಜಿನಿಯರ್, BESCOM, ಬೆಂಗಳೂರು ರವರ ಪತ್ರ ಸಂಖ್ಯೆ: SEE/BRC/EE(O)/AEE(O)/AE(O)/F-1(A)&F-22/22-23/2506-08, ದಿ: 02.07.2022 ರಲ್ಲಿ ಸೂಚಿಸಿರುವ ಎಲ್ಲಾ ನಿಯಮಗಳನ್ನು ಪಾಲಿಸತಕ್ಕದ್ದು.

6) BSNL, ಬೆಂಗಳೂರು ರವರ ಪತ್ರ ಸಂಖ್ಯೆ: DGM(CM)BGTD/NOC for highrise/2021-22/94, ದಿ: 30.06.2022 ರಲ್ಲಿ ಸೂಚಿಸಿರುವ ಎಲ್ಲಾ ನಿಯಮಗಳನ್ನು ಪಾಲಿಸತಕ್ಕದ್ದು.

7) ಕರ್ನಾಟಕ ಅಗ್ನಿಶಾಮಕ ಇಲಾಖೆರವರ ಪತ್ರ ಸಂಖ್ಯೆ: KSFES/GBC(1)/385, ದಿ: 10.11.2022 ರಲ್ಲಿ ವಿವರಿಸಿರುವ ಎಲ್ಲಾ ನಿಯಮಗಳು ಹಾಗೂ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

8) ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳು ಅಂದರೆ ನಾಗರೀಕ ಸೌಲಭ್ಯ ನಿವೇಶನ, ಉದ್ಯಾನವನ, ಬಯಲುಜಾಗ, ರಸ್ತೆಗಳು, ಸರ್ಫೇಸ್ ವಾಹನ ನಿಲುಗಡೆ ಪ್ರದೇಶಗಳನ್ನು ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ.

9) ಕೆ.ಎಸ್.ಪಿ.ಸಿ.ಬಿ ವತಿಯಿಂದ ನಿರಾಕ್ಷೇಪಣಾ ಪತ್ರ (CFE) ಪಡೆದು ಪ್ರಾರಂಭಿಕ ಪ್ರಮಾಣ ಪತ್ರ ಪಡೆಯಲು ಮನವಿ ಸಲ್ಲಿಸುವ ಸಮಯದಲ್ಲಿ ಈ ಕಛೇರಿಗೆ ಸಲ್ಲಿಸುವುದು.

10) ಆರ್.ಎಂ.ಪಿ 2015 ರಂತೆ ರಸ್ತೆಗಾಗಿ ಮೀಸಲಿಟ್ಟಿರುವ ಪ್ರದೇಶವನ್ನು ಕಟ್ಟಡ ಕಾಮಗಾರಿ ಪ್ರಾರಂಭಿಸುವ ಮುನ್ನ ಪ್ರಾಧಿಕಾರಕ್ಕೆ ಉಚಿತವಾಗಿ ನೊಂದಾಯಿತ ತ್ಯಾಗ ಪತ್ರದ ಮೂಲಕ ಹಸ್ತಾಂತರಿಸುವುದು.

11) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.

12) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಬಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

13) ಗ್ರಾಮ ಪಂಚಾಯಿತಿಯಿಂದ ಕಟ್ಟಡ ಅನುಮತಿ ಪತ್ರ ಪಡೆಯುವುದು ಕಡ್ಡಾಯವಾಗಿರುತ್ತದೆ.

14) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ, ಬಿಡಿಎ / ಬಿಬಿಎಂಪಿ / ನಗರ ಸಭೆ / ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

15) ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

16) ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು.

17) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

18) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಯುಕ್ತ ತ್ಯಾಜ್ಯ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

19) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.

20) ಅಭಿವೃದ್ಧಿದಾರರು ಕಟ್ಟಡಗಳಿಗೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

21) ಅಭಿವೃದ್ಧಿದಾರರು ಟ್ರಾನ್ಸ್ ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು, ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.

Next Page....

22) ಪ್ರಾಧಿಕಾರದಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

23) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ರಚನಾತ್ಮಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಬ್ದಾರರಾಗಿರತಕ್ಕದ್ದು. ಈ ಸಂಬಂಧ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾದ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಸೂಕ್ತ ಸುರಕ್ಷತಾಮತ್ತು ಭದ್ರತಾ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

24) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.

25) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

26) ಕಟ್ಟಡದ ಕಾಮಗಾರಿ ಆರಂಭಿಸುವ ಮುನ್ನ ಅರ್ಜಿದಾರರು ಖಾತಾ / ಕಟ್ಟಡ ನಿರ್ಮಾಣದ ಪರವಾನಗಿ ಅನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯತಕ್ಕದ್ದು.

27) ಕಾರ್ಯದರ್ಶಿ, ಕಾರ್ಮಿಕ ಇಲಾಖೆ ರವರ ಪತ್ರ ದಿನಾಂಕ: 04-03-2006 ರ ಪತ್ರದಲ್ಲಿ ವಿಧಿಸಿರುವ ಷರತ್ತುಗಳಿಗೆ ಅಭಿವೃದ್ಧಿದಾರರು ಬದ್ಧರಾಗಿರತಕ್ಕದ್ದು.

28) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಬ್ದಾರರಾಗಿರುವುದಿಲ್ಲ.

29) ಅಭಿವೃದ್ಧಿದಾರರು ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.

30) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಭಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

31) ಗೌರವಾನ್ವಿತ ರಾಷ್ಟ್ರೀಯ ಹಸಿರು ನ್ಯಾಯಪೀಠ ರವರ ಪತ್ರ ಸಂಖ್ಯೆ: PCB/031/C&D/ 2016/5392/2020-21, ದಿನಾಂಕ: 25.02.2021 ರಂತೆ Construction and Demolition (C & D) ಕಸವನ್ನು ವಿಲೇ ಮಾಡುವ ಬಗ್ಗೆ ನಿರ್ವಹಣೆ ಯೋಜನೆಯನ್ನು ULB (Urban Local Body) ರವರಿಗೆ ಸಲ್ಲಿಸಿ ಅನುಮೋದನೆ ಪಡೆದು ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಮುನ್ನ ಸಲ್ಲಿಸುವುದು.

32) SEIAA ನಿಯಮಗಳನ್ವಯ ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ಶೇ 25% ರಷ್ಟು ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

33) ಇತ್ತೀಚಿನ ಸರ್ಕಾರಿ ಆದೇಶ ಸಂಖ್ಯೆ: ನಅಇ/536/ಬೆಂಭೂಸ್ವಾ/2017, ದಿನಾಂಕ: 16.03.2019 ರನ್ವಯ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಅಪೀಲು ಸಂಖ್ಯೆ: 5016//2016 ರ ಷರತ್ತಿಗೊಳಪಟ್ಟಿರುತ್ತದೆ (NGT ಬಫರ್ ಗೆ ಸಂಬಂಧಿಸಿದಂತೆ).

34) ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.

21/03/2023

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರು (ಉತ್ತರ), ಆರ್.ಟಿ.ನಗರ ಬಿ.ಡಿ.ಎ ವಾಣಿಜ್ಯ ಸಂಕೀರ್ಣ, ಬೆಂಗಳೂರು ರವರ ಮಾಹಿತಿಗಾಗಿ.